## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಶ್ರೀ ಎಂ.ವಿಜಯಗೌಡ, (ಜಿಲ್ಲಾ ಪಂಚಾಯತ್ ಸೇವೆ) ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕುಣಿಗಲ್ ಇವರು ಕಾಮಗಾರಿ ನಿರ್ವಹಿಸದೆ ಸುಳ್ಳು ದಾಖಲೆಗಳನ್ನು ಸೃಜಿಸಿ ಹಣ ದುರುಪಯೋಗ ಮಾಡಲು ಪ್ರಯತ್ನಿಸಿ ದುರ್ನಡತೆ ಎಸಗಿರುವ ಬಗ್ಗೆ – ಶಿಸ್ತು ಕ್ರಮ – ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ– ಆದೇಶ.

*ಓದಲಾಗಿದೆ:* ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ:ತುಜಿಪ:ಆಡ97)ಇಂ:ವಿವ:142/2014–15, ದಿನಾಂಕ:3.3.2015.

---***---

***ಪ್ರಸ್ತಾವನೆ:-***

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ರವರು ಮೇಲೆ ಓದಲಾದ ದಿನಾಂಕ:03.3.2015ರ ಪತ್ರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕುಣಿಗಲ್ ಇಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಎಂ.ವಿಜಯಗೌಡ (ಜಿಲ್ಲಾ ಪಂಚಾಯತ್ ಸೇವೆ) ಇವರು ಕುಣಿಗಲ್ ತಾಲ್ಲೂಕು ಪಂಚಾಯತಿಯ ಅನಿರ್ಬಂಧಿತ ಅಭಿವೃದ್ಧಿ ಅನುದಾನದ ಕ್ರಿಯಾ ಯೋಜನೆಯ ಸಂಖ್ಯೆ:71 ರಲ್ಲಿ ಮಡಿಕೆಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಮಡಿಕೆ ಕನ್ನಸಂದ್ರ ಗ್ರಾಮದ ಚರಂಡಿ ನಿರ್ಮಾಣ ಕಾಮಗಾರಿಗೆ 2.00 ಲಕ್ಷ ರೂ.ಗಳಿಗೆ ಅಂದಾಜು ಪಟ್ಟಿ ತಯಾರಿಸಿ, ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ ಪಡೆದು, ಕಾಮಗಾರಿ ನಡೆಯದೇ ಇದ್ದರೂ ಕಾಮಗಾರಿ ನಡೆದಿದೆ ಎಂದು ಅಳತೆ ಪುಸ್ತಕದಲ್ಲಿ ಸುಳ್ಳು ದಾಖಲೆಗಳನ್ನು ನಮೂದಿಸಿ, ಹಳೆಯ ಫೋಟೋ ಲಗತ್ತಿಸಿ ದೃಢೀಕರಿಸಿ 1,98,541/– ರೂ.ಗಳಿಗೆ ಬಿಲ್ಲುಗಳನ್ನು ಸಲ್ಲಿಸಿದ್ದು, ಸ್ಥಳಪರಿಶೀಲನೆ ಸಂದರ್ಭದಲ್ಲಿ ಕಾಮಗಾರಿ ಅನುಷ್ಠಾನಗೊಳಿಸದೇ ಇರುವುದು ಕಂಡುಬಂದಿದ್ದು, ಸದರಿಯವರು ಸರ್ಕಾರಿ ಹಣವನ್ನು ಲಪಟಾಯಿಸಲು ಸಂಚು ರೂಪಿಸಿರುವುದು ಕಂಡುಬಂದಿರುವುದರಿಂದ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಪ್ರಭಾರದಲ್ಲಿದ್ದಾಗ ಕುಣಿಗಲ್ ತಾಲ್ಲೂಕಿನ ಡಿ.ಗೊಲ್ಲರಹಟ್ಟಿ ಗ್ರಾಮದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಸ್ಯೆ ಗಂಭೀರವಾಗಿದ್ದು ತುರ್ತು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾಗ್ಯೂ ಯಾವುದೇ ಕ್ರಮವಹಿಸದೇ ನಿರ್ಲಕ್ಷತೆ ತೋರಿದ್ದಾರೆಂದು, ದಿನಾಂಕ 2–11–2014ರಂದು ಮಾನ್ಯ ಮಹಿಳಾ ಮತ್ತು ಮಕ್ಕಳ ಸಚಿವರು ಸದರಿ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿಯೂ ಸಹ ಗೈರು ಹಾಜರಾಗಿ ದೂರವಾಣಿಗೆ ಲಭ್ಯವಾಗಿರುವುದಿಲ್ಲವೆಂದು, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮನವರಿಕೆ ಮಾಡಿದ್ದರೂ ಸಹ ಸದರಿಯವರು ಕಾಮಗಾರಿಗಳ ಪ್ರಗತಿಯಲ್ಲಿ ಕುಂಠಿತವಾಗಿರುವುದು ಕಂಡುಬಂದಿದ್ದು, ದಿನಾಂಕ 19–02–2015ರಂದು ಜಿಲ್ಲಾ ಪಂಚಾಯತಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಗೆ ಪೂರ್ವಾನುಮತಿ ಪಡೆಯದೆ ಗೈರು ಹಾಜರಾಗಿದ್ದಾರೆಂದು ಇತ್ಯಾದಿ ಕರ್ತವ್ಯ ಲೋಪ ಹಾಗೂ ದುರ್ನಡತೆ ಎಸಗಿರುವ ಬಗ್ಗೆ ಸರ್ಕಾರಕ್ಕೆ ವರದಿ ಮಾಡಿ ಸದರಿಯವರು ಕರ್ತವ್ಯದಲ್ಲಿ ವಂಚನೆ, ತಾತ್ಸಾರ, ನಿರಾಸಕ್ತಿ ಮತ್ತು ಹಣ ದುರುಪಯೋಗದ ಅಕ್ರಮಗಳ ಬಗ್ಗೆ ಸದರಿಯವರ ವಿರುದ್ಧ ಶಿಸ್ತುಕ್ರಮ ಜರುಗಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಹಾಗೂ ಅದರೊಂದಗಿನ ಲಗತ್ತುಗಳನ್ನು ಕೂಲಂಕಷವಾಗಿ ಪರಿಶೀಲಿಸಿರುತ್ತದೆ. ಶ್ರೀ ಎಂ.ವಿಜಯಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕುಣಿಗಲ್ ತಾಲ್ಲೂಕು ಪಂಚಾಯತಿಯ ಮಡಿಕೆ ಕನ್ನಸಂದ್ರ ಗ್ರಾಮದ ಚರಂಡಿ ನಿರ್ಮಾಣ ಕಾಮಗಾರಿಯನ್ನು ಅನುಷ್ಠಾನಗೊಳಿಸಿದಂತೆ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಿದ ಕಾಮಗಾರಿಯ ಹಳೆಯ ಫೋಟೋ ಲಗತ್ತಿಸಿ ದೃಢೀಕರಿಸಿ 1,98,541/– ರೂ.ಗಳಿಗೆ ಬಿಲ್ಲುಗಳನ್ನು ಸಲ್ಲಿಸಿ, ಅಧಿಕಾರ ದುರುಪಯೋಗ ಮಾಡಿ ಹಣ ಲಪಟಾಯಿಸಲು ಸಂಚು ರೂಪಿಸಿರುವುದು ಕಂಡು ಬಂದಿರುವುದರಿಂದ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಪ್ರಭಾರದಲ್ಲಿದ್ದಾಗ ಡಿ.ಗೊಲ್ಲರ ಹಟ್ಟಿ ಗ್ರಾಮದಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಸ್ಯೆ

----2

ಗಂಭೀರವಾಗಿದ್ದರೂ ಸಹ ಅದನ್ನು ಬಗೆಹರಿಸಲು ಪ್ರಯತ್ನಿಸದಿರುವುದು, ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನದಲ್ಲಿ ನಿರ್ಲಕ್ಷತೆ ತೋರಿರುವುದು, ವಿವಿಧ ಸಭೆಗಳಿಗೆ ಪೂರ್ವಾನುಮತಿ ಪಡೆಯದೆ ಗೈರು ಹಾಜರಾಗಿರುವುದು, 13ನೇ ಹಣಕಾಸು ಯೋಜನೆಯ 1 ಮತ್ತು 2ನೇ ಕಂತಿನ ಅನುದಾನದ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತಿಗೆ ಸಲ್ಲಿಸದೆ ಕರ್ತವ್ಯದಲ್ಲಿ ನಿರಾಸಕ್ತಿ ತೋರಿರುವುದು ವೇದ್ಯವಾಗುತ್ತದೆ. ಹಾಗಾಗಿ ಸದರಿಯವರು ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ವಿಫಲರಾಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರ ಕರ್ತವ್ಯಲೋಪ, ದುರ್ನಡತೆ ಮತ್ತು ಹಣ ದುರುಪಯೋಗ ಕುರಿತಾದ ಆರೋಪಗಳ ಬಗೆಗಿನ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 38 ಇಎನ್‌ಕ್ಯೂ 15, ಬೆಂಗಳೂರು, ದಿನಾಂಕ: 25.05.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ಎಂ.ವಿಜಯಗೌಡ, (ಜಿಲ್ಲಾ ಪಂಚಾಯತ್ ಸೇವೆ) ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕುಣಿಗಲ್ ಇವರ ಮೇಲಿನ ಕರ್ತವ್ಯಲೋಪ, ದುರ್ನಡತೆ, ಅಧಿಕಾರ ದುರುಪಯೋಗ ಮತ್ತು ಹಣ ದುರುಪಯೋಗ ಕುರಿತಾದ ಆರೋಪಗಳ ಬಗೆಗಿನ ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 (1) (ಡಿ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿದೆ.

ಅಮಾನತ್ತು ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆ ಪಡೆಯಲು ಸದರಿ ಅಧಿಕಾರಿಯು ಅರ್ಹರಿರುತ್ತಾರೆ ಹಾಗೂ ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಅವರ ಕೇಂದ್ರ ಸ್ಥಾನ ಬಿಡತಕ್ಕದಲ್ಲ.

ಶ್ರೀ ಎಂ.ವಿಜಯಗೌಡ, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಹುದ್ದೆಯ (ಲೀನ್) ಸ್ಥಾನವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಕಛೇರಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೊತ್ತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು
4. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
5. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ರವರ ಮುಖಾಂತರ)
6. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
9. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.